# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಬಿ.ಹೆಚ್.ಸೋಮಶೇಖರ್ ಇವರನ್ನು ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ವಿಭಾಗ-2) ವೃಂದದಲ್ಲಿ ನಿಯಮ-32 ರಡಿ ಸ್ವತಂತ್ರ ಪ್ರಭಾರದಲ್ಲಿಸಿರುವ ಆದೇಶವನ್ನು ಹಿಂಪಡೆಯುವ ಬಗ್ಗೆ

ಓದಲಾಗಿದೆ.

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರ ಅಧಿಕೃತ ಜ್ಞಾಪನ ಸಂಖ್ಯೆ ಇ2 ಇಎಸ್‌ಟಿ 178 2009-10 ದಿನಾಂಕ 16-01-2010
2. ಸರ್ಕಾರದ ಅಧಿಸೂಚನೆ ಸಂಖ್ಯೆ ಗ್ರಾಅಪ 279 ಸೇಶಿಕಾ 2010 ದಿನಾಂಕ 18-01-2012
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರ ನಡವಳಿ ಸಂಖ್ಯೆ ಎ2 ಇಎಸ್‌ಟಿ 253 2010-11 ದಿನಾಂಕ 06-08-2013.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರ ಪತ್ರ ಸಂಖ್ಯೆ ಎ2 ಇಎಸ್‌ಟಿ 253 2010-11 ದಿನಾಂಕ 22-08-2013.

ಪ್ರಸ್ತಾವನೆ:

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 16-01-2010ರ ಅಧಿಕೃತ ಜ್ಞಾಪನದಲ್ಲಿ ಹಿಂದಿನ ಡಿಆರ್‌ಡಿಎಸ್ / ಟಿಡಿಬಿಯಿಂದ ನೇಮಕಗೊಂಡು ಜಿಲ್ಲಾ ಪರಿಷತ್ / ಪಂಚಾಯತ್‌ಗಳಲ್ಲಿ ಸೇವಾ ಸಕ್ರಮಾತಿಗೊಂಡು ಸೇವೆ ಸಲ್ಲಿಸುತ್ತಿದ್ದ ಶ್ರೀ ಬಿ.ಹೆಚ್.ಸೋಮಶೇಖರ್, ಕಿರಿಯ ಇಂಜಿನಿಯರ್ ಇವರನ್ನೊಳಗೊಂಡಂತೆ ಇತರ ಇಬ್ಬರು ಕಿರಿಯ ಇಂಜಿನಿಯರ್‌ಗಳಿಗೆ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) ಹುದ್ದೆಗೆ ಮುಂಬಡ್ತಿ ನೀಡಿದ್ದರು.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 18-01-2012ರ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ರಿಟ್ ಅರ್ಜಿ ಸಂಖ್ಯೆ: 62195-198/2010, 62499-62500/2010 ಮತ್ತು 8935/2011 ಹಾಗೂ ಇನ್ನಿತರ ಅರ್ಜಿಗಳಲ್ಲಿನ ಅಂತಿಮ ತೀರ್ಪಿಗೊಳಪಟ್ಟು, ಜಿಲ್ಲಾ ಪಂಚಾಯತ್ ಸೇವೆಗೆ ಸೇರಿದ ಶ್ರೀ ಬಿ.ಹೆಚ್.ಸೋಮಶೇಖರ್, ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) ಇವರನ್ನೊಳಗೊಂಡಂತೆ ಇತರ 5 ಮಂದಿಗೆ ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ವಿಭಾಗ-2) ವೃಂದದಲ್ಲಿ ನಿಯಮ-32 ರಡಿ ಸ್ವತಂತ್ರ ಪ್ರಭಾರದಲ್ಲಿರಿ, ಶ್ರೀ ಬಿ.ಹೆಚ್.ಸೋಮಶೇಖರ್ ಇವರನ್ನು ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ.ಉಪ ವಿಭಾಗ, ಗೌರಿಬಿದನೂರು, ಚಿಕ್ಕಬಳ್ಳಾಪುರ ಜಿಲ್ಲೆ ಇಲ್ಲಿಗೆ ಸ್ಥಳನಿಯುಕ್ತಿಗೊಳಿಸಲಾಗಿತ್ತು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರು ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ 06-08-2013ರ ನಡವಳಿಯಲ್ಲಿ ಶ್ರೀ ಬಿ.ಹೆಚ್.ಸೋಮಶೇಖರ್ ಇವರಿಗೆ ಅಧಿಕೃತ ಜ್ಞಾಪನ ಸಂಖ್ಯೆ ಎ2 ಇಎಸ್‌ಟಿ 178 2009-10 ದಿನಾಂಕ 16-01-2010ರಲ್ಲಿ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) ಹುದ್ದೆಗೆ ನೀಡಲಾಗಿದ್ದ ಮುಂಬಡ್ತಿಯನ್ನು ಹಿಂಪಡೆಯಲಾಗಿರುತ್ತದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರು ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ದಿನಾಂಕ 22-08-2013ರ ಪತ್ರದಲ್ಲಿ ಶ್ರೀ ಬಿ.ಹೆಚ್.ಸೋಮಶೇಖರ್ ಇವರಿಗೆ ಮೈಸೂರು ಜಿಲ್ಲಾ ಪಂಚಾಯತ್ ಸೇವೆಗೆ ಸೇರಿದವರೆಂದು ತಪ್ಪಾಗಿ ಅರ್ಹ್ಯೆಸಿ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) ಹುದ್ದೆಗೆ ಮುಂಬಡ್ತಿ ನೀಡಲಾಗಿದ್ದು, ಆದರೆ, ಇವರು ಕೊಡಗು ಜಿಲ್ಲಾ ಪಂಚಾಯತ್ ಸೇವೆಗೆ ಸೇರಿದವರೆಂದು ತಿಳಿದು ಬಂದ ಕಾರಣ ಇವರಿಗೆ ಮೈಸೂರು ಜಿಲ್ಲಾ ಪಂಚಾಯತಿಯಿಂದ ಮುಂಬಡ್ತಿ ನೀಡಲು ಅವಕಾಶವಿಲ್ಲವಾದ್ದರಿಂದ ಸದರಿಯವರಿಗೆ ಈ ಹಿಂದೆ ಕಿರಿಯ ಇಂಜಿನಿಯರ್ (ವಿಶೇಷ) ಹುದ್ದೆಗೆ ನೀಡಲಾಗಿದ್ದ ಮುಂಬಡ್ತಿಯನ್ನು ದಿನಾಂಕ 6-8-2013ರ ಅಧಿಕೃತ ಜ್ಞಾಪನದಲ್ಲಿ ಹಿಂಪಡೆಯಲಾಗಿದೆ ಎಂದು ತಿಳಿಸುತ್ತಾ, ಶ್ರೀ ಬಿ.ಹೆಚ್.ಸೋಮಶೇಖರ್ ಇವರಿಗೆ ಸರ್ಕಾರದ ಹಂತದಲ್ಲಿ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) ಹುದ್ದೆಯಿಂದ ನಿಯಮ 32ರಡಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ವಿಭಾಗ-2) ಹುದ್ದೆಯಲ್ಲಿ ಸ್ವತಂತ್ರ ಪ್ರಭಾರದಲ್ಲಿರಿಸಿ ಹೊರಡಿಸಿರುವ ಆದೇಶವನ್ನು ಹಿಂಪಡೆಯುವಂತೆ ಕೋರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ. ಗ್ರಾಅಪ 222 ಸೇಶಿಕಾ 2013 , ಬೆಂಗಳೂರು,**
**ದಿನಾಂಕ. 21-11-2013**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಬಿ.ಹೆಚ್.ಸೋಮಶೇಖರ್ ಇವರಿಗೆ ಅಧಿಸೂಚನೆ ಸಂಖ್ಯೆ ಗ್ರಾಅಪ 279 ಸೇಶಿಕಾ 2010 ದಿನಾಂಕ 18-01-2012 ರಲ್ಲಿ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) ವೃಂದದಿಂದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ವಿಭಾಗ-2) ವೃಂದದಲ್ಲಿ ನಿಯಮ – 32ರಡಿ ಸ್ವತಂತ್ರ ಪ್ರಭಾರದಲ್ಲಿಸಿರುವ ಆದೇಶವನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆಯಲಾಗಿದೆ.

ಮುಂದುವರೆದು, ಶ್ರೀ ಬಿ.ಹೆಚ್.ಸೋಮಶೇಖರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ವಿಭಾಗ-2), ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಗೌರಿಬಿದನೂರು ಇವರನ್ನು ಸದರಿ ಹುದ್ದೆಯ ಕಾರ್ಯಭಾರದಿಂದ ತಕ್ಷಣ ಬಿಡುಗಡೆಗೊಳಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಸಿ.ರಾಜಪ್ಪ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)

---3

2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು / ಚಿಕ್ಕಬಳ್ಳಾಪುರ/ ಕೊಡಗು.
4. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬೆಂಗಳೂರು.
5. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಬಳ್ಳಾಪುರ.
6. ಶ್ರೀ ಬಿ.ಹೆಚ್.ಸೋಮಶೇಖರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ವಿಭಾಗ-2). ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಗೌರಿಬಿದನೂರು (ಮುಂದಿನ ಸ್ಥಳನಿಯುಕ್ತಿ ಕುರಿತು ಸರ್ಕಾರದಲ್ಲಿ ವರದಿ ಮಾಡಿಕೊಳ್ಳಲು ಸೂಚಿಸಿದೆ).
7. ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
8. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಹೆಚ್ಚುವರಿ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
9. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ಇಲಾಖೆ, ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
10. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.